**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,**
**ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)**
**ವಾರ್ಡ್ ಸಮಿತಿ ಸಭೆ, ದಿನಾಂಕ:07-02-2022 ರ ಸಭಾ ನಡವಳಿ**

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/26/21-22

ದಿನಾಂಕ: 07-02-2022 ರಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri Mohammed Ibrahim | Water Inspector BWSSB |
| 4. | Sri Suresh | Ward Committee Member |
| 5. | Sri Syed Ansar Pasha | Ward Committee Member |
| 6. | Sri Purushotham | Ward Committee Member |
| 7. | Sri Gopinath (A.D.S.S) | Ward Committee Member |
| 8. | Smt.Ramani | Ward Committee Member |
| 9. | Narendra Kumar( A.D.S.S) | Ward Committee Member |
| 10. | Bobby.M | Ward Committee Member |
| 11. | Edward.C (A.D.S.S) | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 07-01-2022 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ಮೋದಿ ರಸ್ತೆ, ಉರ್ದು ಶಾಲೆಯ ಹತ್ತಿರ ಡೆಬ್ರೀಸ್ ತೆಗೆಯಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.
2. ವಾರ್ಡಿನ ವ್ಯಾಪ್ತಿಯಲ್ಲಿ ಪ್ರತಿ ಮನೆಗಳ ಕುಡಿಯುವ ನೀರಿನ ಮೀಟರ್‌ಅನ್ನು ಪರಿಶೀಲಿಸಿ, ದುರಸ್ತಿಗೊಂಡಿರುವ ಮೀಟರ್‌ಗಳನ್ನು ಸರಿಪಡಿಸಲು ಸಂಬಂಧಪಟ್ಟ BWSSB ಅಧಿಕಾರಿಗಳಿಗೆ ಸೂಚಿಸಲಾಯಿತು.
3. ಪ್ರತಿ ಮಾಹೆಯಾನದಲ್ಲಿ ಒಂದು ದಿನ ವಾರ್ಡ್ ವ್ಯಾಪ್ತಿಯಲ್ಲಿ ಒತ್ತುವರಿಯಾಗಿರುವ ರಸ್ತೆ ಮತ್ತು ಪಾದಚಾರಿ ಮಾರ್ಗಗಳನ್ನು ಪೋಲೀಸ್, ಮಾರ್ಷಲ್ ಮತ್ತು ಬಿ.ಬಿ.ಎಂ.ಪಿ ಅಧಿಕಾರಿಗಳ ಸಹಯೋಗದೊಂದಿಗೆ ತೆರವುಗೊಳಿಸಲು ಚರ್ಚಿಸಲಾಯಿತು.
4. ಮೋದಿ ಗಾರ್ಡನ್, 6ನೇ ಅಡ್ಡರಸ್ತೆಯಲ್ಲಿರುವ ಬ್ಲಾಕ್‌ಸ್ಪಾಟ್ ಸುತ್ತಲ್ಲೂ ಗ್ರೀನ್ ಪೆನ್ಸಿಂಗ್ ಅಳವಡಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಸಹಿ
(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

Scanned with CamScanner

Scanned with CamScanner